ಆ) ಆ ಪೈಕಿ ಕಳೆದ ಮೂರು ವರ್ಷಗಳ ಅವಧಿಯಲ್ಲಿ ಲಾಭದಲ್ಲಿರುವ ಹಾಗೂ ನಷ್ಟದಲ್ಲಿರುವ ಸಂಸ್ಥೆಗಳೆಷ್ಟು?

ಲಕ್ಷ್ಮಣ ಸ. ಸವದಿ (ಸಹಕಾರ ಸಚಿವರು)

ಅ) ಬಸವ ಕಲ್ಯಾಣ ಪಟ್ಟಣದಲ್ಲಿ 01 ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ, 08 ಕೃಷಿಯೇತರ ಪತ್ತಿನ ಸಹಕಾರ ಸಂಘಗಳು ಮತ್ತು 2 ಪಟ್ಟಣ ಸಹಕಾರ ಬ್ಯಾಂಕುಗಳು ಇರುತ್ತವೆ.

ಆ) ಬಸವ ಕಲ್ಯಾಣ ಪಟ್ಟಣದಲ್ಲಿ ಕಳೆದ ಮೂರು ವರ್ಷಗಳ ಅವಧಿಯಲ್ಲಿ ಲಾಭದಲ್ಲಿರುವ ಹಾಗೂ ನಷ್ಟದಲ್ಲಿರುವ ಸಂಸ್ಥೆಗಳ ವಿವರ ಈ ಕೆಳಕಂಡಂತಿವೆ.

ಕ್ರ ಸಂ.	ವರ್ಷ	ಪ್ರಾ.ಕೃ.ಪ.ಸ ಬ್ಯಾಂಕುಗಳು		ಪತ್ತಿನ ಸಹಕಾರ ಸಂಘಗಳು		ಪಟ್ಟಣ ಸಹಕಾರ ಬ್ಯಾಂಕುಗಳು	
		ಲಾಭ	ನಷ್ಟ	ಲಾಭ	ನಷ್ಟ	ಲಾಭ	ನಷ್ಟ
1	**2**	**3**	**4**	**5**	**6**	**7**	**8**
1	2006–07	01	–	03	05	–	02
2	2007–08	01	–	03	05	–	02
3	2008–09	01	–	03	05	–	02

1217 ಶ್ರೀ ಬಸವರಾಜ್ ಪಾಟೀಲ್ ಅಟ್ಟೂರು ಮಾನ್ಯ ತೋಟಗಾರಿಕೆ ಮತ್ತು ಬಂಧಿಖಾನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ 3 ವರ್ಷಗಳ ಅವಧಿಯಲ್ಲಿ ಬಸವ ಕಲ್ಯಾಣ ಮತ ಕ್ಷೇತ್ರದ ವ್ಯಾಪ್ತಿಯಲ್ಲಿ ತೋಟಗಾರಿಕೆ ಇಲಾಖೆಗೆ ಹನಿ ನೀರಾವರಿಗಾಗಿ ಸಹಾಯಧನ ಕೋರಿ ಅರ್ಜಿಗಳು ಸರ್ಕಾರಕ್ಕೆ ಬಂದಿರುವ ಸಂಖ್ಯೆ ಎಷ್ಟು;

ಆ) ಈ ಪೈಕಿ ವಿಲೇವಾರಿ ಮಾಡಲಾದ ಅರ್ಜಿಗಳೆಷ್ಟು; ಬಾಕಿ ಉಳಿದಿರುವ ಅರ್ಜಿಗಳೆಷ್ಟು; ಹಾಗಿದ್ದಲ್ಲಿ ಎಂದಿನಿಂದ ಬಾಕಿ ಉಳಿದಿದೆ;

ಇ) ಇವುಗಳಿಗಾಗಿ ಎಷ್ಟು ಮೊತ್ತದ ಸಹಾಯಧನವನ್ನು (ಸಬ್ಸಿಡಿ) ನೀಡಲಾಗಿದೆ; ನೀಡಬೇಕಾದ ಸಹಾಯಧನದ ಮೊತ್ತವೆಷ್ಟು; ಯಾವಾಗ ಸಹಾಯಧನವನ್ನು ನೀಡಲಾಗುವುದು?

ಶ್ರೀ (ತೋಟಗಾರಿಕೆ ಮತ್ತು ಬಂಧಿಖಾನೆ ಸಚಿವರು)

ಅ) 91

ಆ) 91. ಅರ್ಜಿಗಳು ಬಾಕಿ ಉಳಿದಿರುವುದಿಲ್ಲ.

ಇ) ರೂ. 29.76 ಲಕ್ಷಗಳು

1218 ಶ್ರೀ ಬಸವರಾಜ್ ಪಾಟೀಲ್ ಅಟ್ಟೂರು ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವಕಲ್ಯಾಣ ಮತ ಕ್ಷೇತ್ರದಲ್ಲಿ ಇರುವ ಒಟ್ಟು ಅಂಗನವಾಡಿ ಕೇಂದ್ರಗಳೆಷ್ಟು;

ಆ) ಈ ಕ್ಷೇತ್ರದಲ್ಲಿ ಹೊಸದಾಗಿ ಯಾವ ಯಾವ ಸ್ಥಳಗಳಲ್ಲಿ ಅಂಗನವಾಡಿ ಕೇಂದ್ರಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆ;

ಇ) ಈ ಕ್ಷೇತ್ರದಲ್ಲಿ ಸ್ವಂತ ಕಟ್ಟಡ/ಬಾಡಿಗೆ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳು ಯಾವುವು; ಆ ಪೈಕಿ ಕಟ್ಟಡದ ಸಮಸ್ಯೆಯನ್ನು ಎದುರಿಸುತ್ತಿರುವ ಕೇಂದ್ರಗಳು ಯಾವುವು;

ಈ) ಈ ಮತಕ್ಷೇತ್ರದಲ್ಲಿ ಯಾವ ಯಾವ ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡವನ್ನು ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆ; .

ಉ) ಪ್ರಸಕ್ತ ಸಾಲಿನಲ್ಲಿ ಈ ಮತ ಕ್ಷೇತ್ರಕ್ಕೆ ಸೇರಿದಂತೆ ಬೀದರ್ ಜಿಲ್ಲೆಯಲ್ಲಿ ಅಂಗನವಾಡಿ ಕೇಂದ್ರಗಳನ್ನು ನಿರ್ಮಿಸಲು ದಿನಾಂಕ 30–6–2009ರ ಅಂತ್ಯಕೆ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ (ವಿಧಾನ ಸಭಾ ಕ್ಷೇತ್ರವಾರು ಅಂಕಿ ಅಂಶಗಳಲ್ಲಿ ಒದಗಿಸುವುದು)

ಊ) ಬಸವಕಲ್ಯಾಣ ಪಟ್ಟಣವು ಉಪ ವಿಭಾಗ ಕೇಂದ್ರವಾಗಿದ್ದು ಹೆಚ್ಚಿನ ಜನಸಂಖ್ಯೆಯನ್ನು ಹೊಂದಿರುವುದರಿಂದ ಇಲ್ಲಿನ ಜನಸಂಖ್ಯೆಗೆ ಅನುಗುಣವಾಗಿ ಹೊಸದಾಗಿ ಯಾವ ಯಾವ ಸ್ಥಳಗಳಲ್ಲಿ ಅಂಗನವಾಡಿ ಕೇಂದ್ರಗಳನ್ನು ಪ್ರಾರಂಭಿಸಲಾಗುವುದು?

ಶ್ರೀ ಪಿ.ಎಂ. ನರೇಂದ್ರಸ್ವಾಮಿ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು)

ಅ) ಬಸವಕಲ್ಯಾಣ ಮತ ಕ್ಷೇತ್ರದಲ್ಲಿ 301 ಅಂಗನವಾಡಿ ಕೇಂದ್ರಗಳಿವೆ.

ಆ) ಈ ಕ್ಷೇತ್ರದಲ್ಲಿ 41 ಹೊಸ ಅಂಗನವಾಡಿ ಕೇಂದ್ರಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆ. ಇದರ ಪಟ್ಟಿ ಅನುಬಂಧ–1ರಲ್ಲಿ ಒದಗಿಸಿದೆ.